ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

ಚುಕ್ಕೆ ಗುರುತಿನ ಪ್ರಶ್ನೆ

ದಿನಾಂಕ : 25-03-2021 ಪ್ರಶ್ನೆ ಸಂಖ್ಯೆ : 290 (2122)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಎಂ.ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರ ನೀಡಬೇಕಾದ ದಿನಾಂಕ : 25-03-2021

ಉತ್ತರಿಸುವ ಸಚಿವರು : ಸಣ್ಣ ನೀರಾವರಿ ಸಚಿವರು

ವಿಷಯ : ನೂತನ ಕೆರೆ, ಮತ್ತು ಅಣೆಕಟ್ಟುಗಳ ನಿರ್ಮಾಣದ ಬಗ್ಗೆ

(ಅ) ಸಣ್ಣ ನೀರಾವರಿ ಇಲಾಖೆಯಿಂದ ಕಳೆದ 3 ವರ್ಷಗಳಲ್ಲಿ ಹಾಸನ ಜಿಲ್ಲೆಯಲ್ಲಿ ಎಷ್ಟು ನೂತನ ಕೆರೆಗಳನ್ನು, ಪಿಕಪ್ ಭಂಡಾರಗಳನ್ನು ಮತ್ತು ಅಣೆಕಟ್ಟುಗಳನ್ನು ನಿರ್ಮಾಣ ಮಾಡಲಾಗಿದೆ; ಕಾಮಗಾರಿಗಳು ಯಾವ ಹಂತದಲ್ಲಿವೆ; ಈ ಕಾಮಗಾರಿಗಳಿಗಾಗಿ ಮಂಜೂರಾದ ಹಾಗೂ ಬಿಡುಗಡೆಯಾಗಿರುವ ಅನುದಾನವೆಷ್ಟು; ಇದರಲ್ಲಿ ಗುತ್ತಿಗೆದಾರರಿಗೆ ಬಿಡುಗಡೆ ಮಾಡಿರುವ ಅನುದಾನವೆಷ್ಟು; (ಕಾಮಗಾರಿವಾರು ವಿವರ ನೀಡುವುದು)

(ಆ) ಸದರಿ ಇಲಾಖೆಯಿಂದ ಕಳೆದ 3 ವರ್ಷಗಳಲ್ಲಿ ಹಾಸನ ಜಿಲ್ಲೆಯಲ್ಲಿ ಎಸ್‌ಸಿಪಿ/ಟಿಎಸ್‌ಪಿ ಯೋಜನೆಯಡಿ ಎಷ್ಟು ಕೆರೆಗಳನ್ನು, ಪಿಕಪ್ ಭಂಡಾರಗಳನ್ನು ಮತ್ತು ಅಣೆಕಟ್ಟುಗಳನ್ನು ನಿರ್ಮಾಣ ಮಾಡಲಾಗಿದೆ; ಕಾಮಗಾರಿಗಳು ಯಾವ ಹಂತದಲ್ಲಿವೆ; ಈ ಕಾಮಗಾರಿಗಳಿಗಾಗಿ ಮಂಜೂರಾದ ಹಾಗೂ ಬಿಡುಗಡೆಯಾಗಿರುವ ಅನುದಾನವೆಷ್ಟು; ಇದರಲ್ಲಿ ಗುತ್ತಿಗೆದಾರರಿಗೆ ಬಿಡುಗಡೆ ಮಾಡಿರುವ ಅನುದಾನವೆಷ್ಟು; (ಕಾಮಗಾರಿವಾರು ವಿವರ ನೀಡುವುದು)

(ಇ) ಸದರಿ ಇಲಾಖೆಯಿಂದ ಕಳೆದ 3 ವರ್ಷಗಳಲ್ಲಿ ಹಾಸನ ಜಿಲ್ಲೆಯ ಯಾವ ಯಾವ ಕೆರೆಗಳ ರಿಪೇರಿ, ಪುನಶ್ಚೇತನ ಮತ್ತು ನವೀಕರಣ ಕಾಮಗಾರಿಗಳನ್ನು ಮಾಡಲಾಗಿದೆ; ಕಾಮಗಾರಿಗಳು ಯಾವ ಹಂತದಲ್ಲಿವೆ; ಈ ಕಾಮಗಾರಿಗಳಿಗಾಗಿ ಮಂಜೂರಾದ ಹಾಗೂ ಬಿಡುಗಡೆಯಾಗಿರುವ ಅನುದಾನವೆಷ್ಟು; ಇದರಲ್ಲಿ ಗುತ್ತಿಗೆದಾರರಿಗೆ ಬಿಡುಗಡೆ ಮಾಡಿರುವ ಅನುದಾನವೆಷ್ಟು? (ಕಾಮಗಾರಿವಾರು ವಿವರ ನೀಡುವುದು)